12.8-25 ,
12-0-156

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪಿ.ಹೆಚ್.ಪೂಜಾರ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ**

**ವಿಷಯ:**

ವಿಜಯವಾಣಿ ಕನ್ನಡ ದಿನಪತ್ರಿಕೆಯಲ್ಲಿ ಪ್ರಕಟಣೆಯಾಗಿರುವ **"ಕಳೆಗುಂದಿದ ಸಂಸ್ಕೃತ ವಿ.ವಿ ಹೊಸ ಕ್ಯಾಂಪಸ್, ಮರಡಿಗುಡ್ಡೆಯ 100 ಎಕರೆಯಲ್ಲಿ ಕಟ್ಟಡ ನಿರ್ಮಾಣಗೊಂಡರೂ ಇಲ್ಲ. ಉದ್ಘಾಟನೆ ಭಾಗ್ಯ! ವಿದ್ಯಾರ್ಥಿಗಳು ಅತಂತ್ರ"** ಎಂಬ ಶೀರ್ಷಿಕೆಯಡಿಯಲ್ಲಿ ಪ್ರಕಟಣೆಯಾಗಿರುವ ವಿಷಯವನ್ನು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ಕೋರುತ್ತೇನೆ

ದೇವ ಭಾಷೆ ಸಂಸ್ಕೃತವು ರಾಜ್ಯದಲ್ಲಿ ಶಿಕ್ಷಣಕ್ಕೆ ತನ್ನದೇಯಾದ ವಿಶೇಷ ಕೊಡುಗೆಯನ್ನು ನೀಡಿದೆ. ಆದರೆ ಅದಕ್ಕೆ ಇಂಬು ಕೊಡುವಂತೆ ಸಂಸ್ಕೃತ ವಿಶ್ವವಿದ್ಯಾಲಯ ಸ್ಥಾಪನೆಯಾಗಿ, ಅದಕ್ಕೊಂದು ಹೊಸ ಕಟ್ಟಡ ನಿರ್ಮಾಣಗೊಂಡು ವರ್ಷಗಳೇ ಕಳೆದರೂ ಲೋಕಾರ್ಪಣೆ ಭಾಗ್ಯ ಲಭಿಸದೇ ಇರುವುದರಿಂದ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ದುರ್ದೈವದ ಸಂಗತಿಯಾಗಿದೆ.

ಮಾಗಡಿ ತಾಲೂಕಿನ ತಿಪ್ಪಸಂದ್ರ ಹೋಬಳಿ ಕೆಂಪಯ್ಯನ ಪಾಳ್ಯದ ಮರಡಿಗುಡ್ಡೆಯಲ್ಲಿನ 100 ಎಕರೆ ಪ್ರದೇಶದಲ್ಲಿ ರಾಜ್ಯದ ಏಕೈಕ ಸಂಸ್ಕೃತ ವಿಶ್ವವಿದ್ಯಾಲಯದ ನೂತನ ಕಟ್ಟಡ ನಿರ್ಮಾಣಕ್ಕೆ 2022 ಸಾಲಿನಲ್ಲಿ ಅಂದಿನ ಬಿಜೆಪಿ ನೇತೃತ್ವದ ಸರ್ಕಾರವಿದ್ದಾಗ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರು ರಾಮನಗರದಲ್ಲಿ ಭೂಮಿಪೂಜೆ ನೆರವೇರಿಸಿದ್ದರು. ಅದಕ್ಕೆ, ನೀಡಲಾದ 25 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ಕಟ್ಟಡಗಳಲ್ಲಿ ಬಾಲಕ, ಬಾಲಕಿಯರ ವಸತಿ ನಿಲಯ, ಆಡಳಿತ ಕಚೇರಿ, ತರಗತಿಗಳ ಕೊಠಡಿಗಳಿದ್ದು, ಅಲ್ಲಿ ಸಂಸ್ಕೃತ ಕಾವ್ಯಯೋಗ, ಆಯುರ್ವೇದ, ಸಾಹಿತ್ಯಗಳಲ್ಲಿ ಸ್ನಾತಕ, ಸ್ನಾತಕೋತ್ತರ ಪದವಿ, ಪಿ.ಎಚ್‌ಡಿ. ಕೋರ್ಸುಗಳಿಗಾಗಿ ಕಟ್ಟಡ ಪೂರ್ಣಗೊಂಡಿದೆ. 100 ಎಕರೆ ಜಮೀನು ಸಮತಟ್ಟಾಗಿರುವ ಕಾರಣದಿಂದ ಗುರುಕುಲ ಪದ್ಧತಿ ಏಕಕಾಲದಲ್ಲಿ 1 ಸಾವಿರ ಮಂದಿಗೆ ಯೋಗ ಹಾಗೂ ಆಯುರ್ವೇದಿಕ ತರಬೇತಿ ನೀಡಲು ಅಲ್ಲಿಯೇ ಇನ್ನೊಂದಿಷ್ಟು ಜಾಗದ ಅಗತ್ಯತೆ ಕೂಡ ಇದೆ ಎನ್ನಲಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ಅಲ್ಲಿನ ರಾಷ್ಟ್ರೀಯ ಹೆದ್ದಾರಿಯಿಂದ ಸಂಸ್ಕೃತ ವಿವಿಯವರೆಗೆ ತಲುಪಲು ಮಣ್ಣಿನ ರಸ್ತೆ ಇದ್ದು, ಈಗ ಉತ್ತಮವಾದ ರಸ್ತೆ ನಿರ್ಮಾಣವು ಕೂಡ ತುರ್ತು ಅಗತ್ಯವಾಗಿರುತ್ತದೆ ಎಂದು ವರದಿಯಾಗಿದೆ.

ಸದ್ಯಕ್ಕೆ ಸಂಸ್ಕೃತ ವಿವಿ ನಡೆಸಿಕೊಂಡು ಹೋಗಲು ಬೇಕಾದ ಅವಶ್ಯಕ ಕಟ್ಟಡಗಳು ನಿರ್ಮಾಣಗೊಂಡು ತಲೆ ಎತ್ತಿದ್ದರೂ ಅವುಗಳ ಬಳಕೆ ಇಲ್ಲದೆ ನಿರುಪಯೋಗಿಯಾಗಿದೆ. ಅಗತ್ಯ ಕಾವಲು ಇಲ್ಲದೆ ಅನಾಥವಾದ ಕಾರಣ ವಿ.ವಿಯ ಕಟ್ಟಡದ ಕಿಟಕಿ, ಬಾಗಿಲುಗಳು ನಿರ್ವಹಣೆ ಕೊರತೆಯಿಂದ ಹಾಳಾಗುತ್ತಿರುವುದಲ್ಲದೇ, ಅವೆಲ್ಲ ಕಟ್ಟಡಗಳು ಅಕ್ರಮ ಚಟುವಟಿಕೆಗಳ ತಾಣವಾಗಿಯೂ ದುರ್ಬಳಕೆಯಾಗುತ್ತಿವೆ ಎಂಬುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಾಗಿದೆ. ಹಾಗೆಯೇ, ಅಲ್ಲಿ ಕತ್ತಲಾಗುತ್ತಿದಂತೆ ಕ್ಯಾಂಪಸ್ ನಲ್ಲಿಯ ಬೆಲೆಬಾಳುವ ಆಯುರ್ವೇದದ ಮರಗಳು ಕಟಾವ ಆಗುತ್ತಾ ಕಳ್ಳತನ ಆಗುತ್ತಿವೆ ಎಂಬ ವಿಷಯ ವರದಿಯಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈ ವಿಚಾರವನ್ನು ತೀವ್ರವಾಗಿ ಪರಿಗಣಿಸಿ, ಸಂಸ್ಕೃತ ವಿಶ್ವ ವಿದ್ಯಾಲಯದ ಸಂರಕ್ಷಣೆಗಾಗಿ ಅಗತ್ಯ ಕ್ರಮಗಳನ್ನು ಕೈಕೊಂಡು, ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಮೂಲಕ ವಿಶ್ವ ವಿದ್ಯಾಲಯ ಕಟ್ಟಡಗಳ ಉದ್ಘಾಟನೆ ಮಾಡಬೇಕೆಂದು ಮಾನ್ಯ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರಿಗೆ ಈ ಶೂನ್ಯವೇಳೆಯಲ್ಲಿ ಒತ್ತಾಯಿಸುತ್ತೇನೆ.

**ಉತ್ತರ:-**

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವನ್ನು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಅಧಿನಿಯಮ 2009 ರಡಿ 2010ರಲ್ಲಿ ಪ್ರಾರಂಭಿಸಲಾಗಿರುತ್ತದೆ. ಪ್ರಸ್ತುತ ಈ ವಿಶ್ವವಿದ್ಯಾಲಯವು ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ, ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು ಇಲ್ಲಿ ಕಾರ್ಯನಿರ್ವಹಿಸುತ್ತಿದೆ.

ಕಂದಾಯ ಇಲಾಖೆಯು ಆದೇಶ ಸಂಖ್ಯೆ: ಆರ್‌ಡಿ 112 ಎಲ್‌ಜಿಬಿ 2012, ದಿನಾಂಕ: 30.03.2013ರಲ್ಲಿ ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ತಿಪ್ಪಸಂದ್ರ ಹೋಬಳಿ, ತಿಪ್ಪಸಂದ್ರ ಗ್ರಾಮದ ಸರ್ವೆ ನಂಬರ್ 40ರಲ್ಲಿ 242-22 ಎಕರೆ/ಗುಂಟೆ ಜಮೀನಿನ ಪೈಕಿ 100 ಎಕರೆ ಜಮೀನನ್ನು ಕೆಲವು ಷರತ್ತುಗಳನ್ನು ವಿಧಿಸಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಉಚಿತವಾಗಿ ಮಂಜೂರು ಮಾಡಲಾಗಿರುತ್ತದೆ. ಸದರಿ ಜಮೀನಿನಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ನೂತನ ಕಟ್ಟಡ, ರಸ್ತೆ, ಕಾಂಪೌಂಡ್ ಗೋಡೆ ಮತ್ತು ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು 2021ನೇ ಸಾಲಿನಲ್ಲಿ ರೂ.369.00 ಕೋಟಿಗಳ ಕಾಮಗಾರಿ ಅನುದಾನವನ್ನು ಬಿಡುಗಡೆ ಮಾಡುವಂತೆ ಕ್ರಿಯಾ ಯೋಜನೆಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ರೂ.369.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವ ಸಂಬಂಧ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಆರ್ಥಿಕ ಇಲಾಖೆಯು ಈ ಕೆಳಕಂಡಂತೆ ಅಭಿಪ್ರಾಯಿಸಿರುತ್ತದೆ.

> **"ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ತಿಪ್ಪಸಂದ್ರ ಗ್ರಾಮದಲ್ಲಿ ಸಂಸ್ಕೃತ ವಿಶ್ವವಿದ್ಯಾಲಯದ ನೂತನ ಕಟ್ಟಡವನ್ನು ಪ್ರಾರಂಭಿಸಲು ಅನುಮತಿ ಹಾಗೂ ಈ ಸಂಬಂಧ ಹೆಚ್ಚುವರಿ ಅನುದಾನವನ್ನು ಕೋರಿರುವ ಪ್ರಸ್ತಾವನೆಗೆ ಸಂಬಂಧಿಸಿದಂತೆ, ಪ್ರಸ್ತುತ ಇರುವ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಯಾವುದೇ ಹೊಸ ಕಾಮಗಾರಿಗಳಿಗೆ ಸಹಮತಿ ನೀಡಲು ಸಾಧ್ಯವಿಲ್ಲವೆಂದು. ಆಡಳಿತ ಇಲಾಖೆಗೆ ತಿಳಿಸಿರುತ್ತದೆ"**

ಆರ್ಥಿಕ ಇಲಾಖೆಯ ಅಭಿಪ್ರಾಯದನ್ವಯ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ದಿನಾಂಕ:05.04.2021ರಂದು ಸೂಕ್ತ ಹಿಂಬರಹವನ್ನು ನೀಡಲಾಗಿರುತ್ತದೆ.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ದಿನಾಂಕ: 03.03.2025ರಂದು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಕ್ಯಾಂಪಸ್‌ಗೆ ಹೋಗುವ 30 ಅಡಿ ಅಗಲ ಹಾಗೂ 0.8 ಕಿಲೋ ಮೀಟರ್ ಉದ್ದದ ಕಚ್ಚಾ ರಸ್ತೆಯ ಅಭಿವೃದ್ಧಿಗೆ ರೂ.274.00 ಲಕ್ಷಗಳ ಅಂದಾಜು ವೆಚ್ಚದ ಅನುದಾನ ಕೋರಿದ್ದು, ಈ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಕೆಳಕಂಡಂತೆ ಅಭಿಪ್ರಾಯ ನೀಡಿರುತ್ತದೆ.

> **"ಪ್ರಸಕ್ತ 2024-25ನೇ ಸಾಲು ಮುಕ್ತಾಯಗೊಂಡಿರುವುದರಿಂದ ಹೆಚ್ಚುವರಿ ಅನುದಾನ ಒದಗಿಸಲು ಅವಕಾಶವಾಗುವುದಿಲ್ಲ ಹಾಗೂ ಈಗಾಗಲೇ ಪ್ರಸ್ತಾಪಿತ ಲೆಕ್ಕಶೀರ್ಷಿಕೆಯಡಿ ಬಿಲ್ಲುಗಳು ಪಾವತಿಗೆ ಬಾಕಿಯಿದ್ದು, ಒಂದು ವೇಳೆ, ಸದರಿ ಕಾಮಗಾರಿಗಳಿಗೆ ಸಹಮತಿಸಿದ್ದಲ್ಲಿ ಕಾರ್ಯಭಾರ ಮತ್ತಷ್ಟು ಹೆಚ್ಚಾಗಿ ಬಾಕಿ ಬಿಲ್ಲುಗಳ ಪಾವತಿಗೆ ಒತ್ತಡ ಉಂಟಾಗುವುದರಿಂದ ಸದರಿ ಕಾಮಗಾರಿಯನ್ನು ತೆಗೆದುಕೊಳ್ಳುವುದನ್ನು ಸದ್ಯಕ್ಕೆ ಮುಂದೂಡುವಂತೆ ಆರ್ಥಿಕ ಇಲಾಖೆಯು ದಿನಾಂಕ:21.04.2025ರ ಟಿಪ್ಪಣಿಯಲ್ಲಿ ತಿಳಿಸಿರುವುದರಿಂದ, ಸದ್ಯಕ್ಕೆ ವಿಲೇ ಇಡಲಾಗಿದೆ"**

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಮಂಜೂರಾದ ಜಮೀನಿನಲ್ಲಿ ಸಂಸ್ಕೃತ ಸಂಶೋಧನೆ, ಭಾಷಾ ಅಧ್ಯಯನ ಹಾಗೂ ಸಂಸ್ಕೃತ ಭಾಷಾ ಅಭಿವೃದ್ಧಿ ದೃಷ್ಟಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವತಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿ ಹಾಗೂ ಸಂಸ್ಕೃತ ಅಧ್ಯಯನ ಕೇಂದ್ರದ ಕಟ್ಟಡ ನಿರ್ಮಾಣ ಕುರಿತಂತೆ ಅಗತ್ಯ ಕ್ರಮ ಕೈಗೊಳ್ಳಲು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯಕ್ಕೆ ನಿರ್ದೇಶನ ನೀಡಲಾಗಿರುತ್ತದೆ. ಅದರನ್ವಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದೊಂದಿಗೆ ಕರಾರು ಒಪ್ಪಂದವನ್ನು ಮಾಡಿಕೊಂಡು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿ ಕಟ್ಟಡ ಮತ್ತು ಸಂಸ್ಕೃತ ಅಧ್ಯಯನ ಕೇಂದ್ರದ ಕಟ್ಟಡಗಳನ್ನು ನಿರ್ಮಿಸಲು ದಿನಾಂಕ:17.08.2021ರಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನ ಮಂಡಳಿಯಲ್ಲಿ ಒಪ್ಪಿ ರೂ.25.00 ಕೋಟಿ

ಅನುದಾನವನ್ನು ನೀಡಿ ಕಾಮಗಾರಿಯನ್ನು ಪೂರ್ಣಗೊಳಿಸಿರುತ್ತದೆ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಗಳು ಮಾಡಿಕೊಂಡಿರುವ ಒಡಂಬಡಿಕೆಯ ಪ್ರಕಾರ (MoU) ನಿರ್ಮಾಣಗೊಂಡಿರುವ ನೂತನ ಕಟ್ಟಡದಲ್ಲಿ ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸುವಂತೆ ಎರಡೂ ವಿಶ್ವವಿದ್ಯಾಲಯಗಳಿಗೆ ಸೂಚಿಸಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 91 ಹೆಚ್‌ಪಿಯು 2024, ದಿನಾಂಕ: 05.09.2024ರಲ್ಲಿ 2024-25ನೇ ಸಾಲಿಗೆ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ರೂ.1.00 ಕೋಟಿಗಳ ಅನುದಾನವನ್ನು ನೀಡಲಾಗಿರುತ್ತದೆ. ಪ್ರಸ್ತುತ 2025-26ನೇ ಸಾಲಿನ ಆಯವ್ಯಯದಲ್ಲಿ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ವೇತನಕ್ಕಾಗಿ ರೂ.12.68 ಕೋಟಿ ಅನುದಾನವನ್ನು ಒದಗಿಸಲಾಗಿರುತ್ತದೆ.

*******

**ಸಂಖ್ಯೆ: ಇಡಿ 276 ಯುಎನ್‌ಇ 2025**

(ಡಾ॥ ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ, ಸಚಿವರು